# ಬೆಂಗಳೂರು ದಕ್ಷಿಣ ನಗರ ಪಾಲಿಕೆ

ಆಯುಕ್ತರವರ ಕಚೇರಿ, ಪಾಲಿಕೆ ಕಚೇರಿಗಳ ಸಂಕೀರ್ಣ, 2ನೇ ಮಹಡಿ,
9ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, 2ನೇ ಬ್ಲಾಕ್, ಜಯನಗರ ಬೆಂಗಳೂರು– 560011

ಸಂಖ್ಯೆ: ಅ.ಅ(ಅ)/ಆರ್/197/2025–26 ದಿನಾಂಕ:12–01–2026

## ನೇಮಕಾತಿ ಪ್ರಕಟಣೆ

ಬೆಂಗಳೂರು ದಕ್ಷಿಣ ನಗರ ಪಾಲಿಕೆಯು **ಕಾನೂನು ಕೋಶದ ಮುಖ್ಯಸ್ಥರ ಹುದ್ದೆಗಾಗಿ**, ಸೇವಾ ವಿಷಯಗಳಲ್ಲಿ, ಕಾರ್ಮಿಕರ ಕಾನೂನು, ಭೂಕಾನೂನು ಇತ್ಯಾದಿ ವಿಷಯಗಳಲ್ಲಿ ಉತ್ತಮ ಪರಿಣಿತಿ ಹೊಂದಿರುವ ನಿವೃತ್ತ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು ಅಥವಾ ಸಹಾಯಕ ಡ್ರಾಫ್ಟ್‌ಮೆನ್ ಹುದ್ದೆಗಿಂತ ಕಡಿಮೆ ಇಲ್ಲದ ಮತ್ತು ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಯಾಗಿ ಸಂಸದೀಯ ವ್ಯವಹಾರಗಳ ಇಲಾಖೆಯಲ್ಲಿ ಕಾರ್ಯನಿರ್ವಹಿಸಿದ ನಿವೃತ್ತ ಅಧಿಕಾರಿ ಅಥವಾ ಕರ್ನಾಟಕದಲ್ಲಿ ಕನಿಷ್ಠ 10 ವರ್ಷಗಳ ವಕೀಲ ವೃತ್ತಿಯ ಅನುಭವ ಹೊಂದಿರುವ ವಕೀಲರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವವರು 65 ವರ್ಷಗಳಿಗೆ ಮೀರದ ವಯೋಮಿತಿ ಹೊಂದಿರತಕ್ಕದ್ದು.

- ಹುದ್ದೆಯ ಅವಧಿ ಪ್ರಾರಂಭದಲ್ಲಿ 1 ವರ್ಷದವರೆಗೆ ಇರುತ್ತದೆ. ಕಾರ್ಯಕ್ಷಮತೆಯನ್ನು ಆಧರಿಸಿ 01 ರಿಂದ 3 ವರ್ಷಗಳವರೆಗೆ ವೃತ್ತಿಯಲ್ಲಿ ಮುಂದುವರೆಸಲಾಗುವುದು.
- ಸಾರಿಗೆ ವೆಚ್ಚ ಸೇರಿದಂತೆ **ರೂ.1,00,000/–**(ರೂ. ಒಂದು ಲಕ್ಷಗಳು) ಸಂಚಿತ ವೇತನ ನಿಗದಿಪಡಿಸಲಾಗುವುದು. ನಗರ ಪಾಲಿಕೆ ಉದ್ಯೋಗಿಗಳಿಗೆ ಇರುವಂತೆ ರಜೆ ಮತ್ತು ವೈದ್ಯಕೀಯ ಸೌಲಭ್ಯಗಳಿರುವುದು.
- ಸಂದರ್ಶನದ ಮೂಲಕ ನೇಮಕ ಮಾಡಲಾಗುವುದು.

ಸಂಪೂರ್ಣ ವ್ಯಕ್ತಿ ಚಿತ್ರಣ (ಬಯೋಡೇಟ) ವಿರುವ ಮತ್ತು ಸಂಬಂಧಿಸಿದ ದಾಖಲಾತಿಗಳನ್ನು ಲಗತ್ತಿಸಿರುವ ಅರ್ಜಿಗಳನ್ನು 'ಮಾನ್ಯ ಆಯುಕ್ತರು' ಬೆಂಗಳೂರು ದಕ್ಷಿಣ ನಗರ ಪಾಲಿಕೆ, ಪಾಲಿಕೆ ಕಚೇರಿಗಳ ಸಂಕೀರ್ಣ, 2ನೇ ಮಹಡಿ, 9ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ, 2ನೇ ಬ್ಲಾಕ್, ಜಯನಗರ ಬೆಂಗಳೂರು– 560011 ಇವರ ವಿಳಾಸಕ್ಕೆ ಲಕೋಟೆಯ ಮೇಲೆ **ಕಾನೂನು ಕೋಶದ ಮುಖ್ಯಸ್ಥರ ಹುದ್ದೆಗಾಗಿ** ಅರ್ಜಿ ಎಂಬ ಮೇಲ್ಬರಹ ಮಾಡಿ ದಿನಾಂಕ: **20–01–2026** ರೊಳಗೆ ಅರ್ಜಿಗಳನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಬಹುದಾಗಿರುತ್ತದೆ. ಅವಧಿ ಮುಗಿದ ನಂತರ ಸಲ್ಲಿಸಿದ್ದಲ್ಲಿ ಅಂತಹ ಯಾವುದೇ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಸಹಿ/–

**ಅಪರ ಆಯುಕ್ತರು (ಅಭಿವೃದ್ಧಿ)**
**ಬೆಂಗಳೂರು ದಕ್ಷಿಣ ನಗರ ಪಾಲಿಕೆ**